# ಕರ್ನಾಟಕ ಸರ್ಕಾರ

ಸಂಖ್ಯೆ:ಪಸಂಮೀ ಇ-142 ಮೀಇಯೋ 2022 ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 26-05-2022

# ಅಧಿಸೂಚನೆ

ಕರ್ನಾಟಕ ಕರಾವಳಿ ಮೀನುಗಾರಿಕೆ (ನಿಯಂತ್ರಣ) ಕಾಯಿದೆ 1986 ರ ಸೆಕ್ಷನ್-3 ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಹಿಂದೆ ಹೊರಡಿಸಲಾಗಿದ್ದ ಅಧಿಸೂಚನೆ ಸಂಖ್ಯೆ: ಪಸಂಮೀ/ಇ-119/ಮೀಯೋ/2020 ದಿನಾಂಕ: 13-05-2020 ಅನ್ನು ರದ್ದುಗೊಳಿಸಿ ಕರ್ನಾಟಕದ ಕರಾವಳಿಯಲ್ಲಿ ಯಾವುದೇ ಬಲೆಗಳನ್ನು / ಸಾಧನಗಳನ್ನು ಉಪಯೋಗಿಸಿ, ಮೀನುಗಾರಿಕೆಗಾಗಿ ಯಾಂತ್ರಿಕ ದೋಣಿಗಳ ಬಳಕೆಯನ್ನು ಮುಂದಿನ ಆದೇಶದವರೆಗೆ ಕೆಳಕಂಡಂತೆ ನಿಷೇಧಿಸಿದೆ.

ಕರ್ನಾಟಕ ಕರಾವಳಿಯ ಮೂರು ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ Territorrial Waters (12 ನಾಟಿಕಲ್ ಮೈಲಿವರೆಗೆ) ಭಾಗದಲ್ಲಿ ಮುಂಗಾರು ಋತುವಿನಲ್ಲಿ ಅಂದರೆ ದಿನಾಂಕ: 01/06/2022 ರಿಂದ 31/07/2022 ರವರೆಗೆ ಒಟ್ಟು 61 ದಿನಗಳ (ಉಭಯ ದಿನಗಳು ಸೇರಿದಂತೆ) ಅವಧಿಗೆ ಏಕ ರೂಪದ ಮೀನುಗಾರಿಕೆ ನಿಷೇಧ ಜಾರಿಯಲ್ಲಿರುತ್ತದೆ.

ಆದಾಗ್ಯೂ, ಮೇಲ್ಕಂಡ ನಿಷೇಧದ ಅವಧಿಯಲ್ಲಿ ಕರ್ನಾಟಕದ 3 ಕರಾವಳಿ ಜಿಲ್ಲೆಗಳಲ್ಲಿ ದೋಣಿಯನ್ನು ಸಾಗಿಸುವ ಉದ್ದೇಶಕ್ಕಾಗಿಯೇ 10 ಅಶ್ವಶಕ್ತಿಯವರೆಗಿನ ಸಾಮರ್ಥ್ಯದ ಮೋಟಾರೀಕೃತ ದೋಣಿ ಹಾಗೂ ಸಾಂಪ್ರದಾಯಿಕ / ನಾಡದೋಣಿಗಳು ಕರಾವಳಿ ಮೀನುಗಾರಿಕೆಯನ್ನು ಕೈಗೊಳ್ಳಲು ಅನುಮತಿಸಿದೆ.

ಸರ್ಕಾರದ ಈ ಆದೇಶವನ್ನು ಉಲ್ಲಂಘಿಸುವ ಮೀನುಗಾರಿಕಾ ದೋಣಿಗಳು ಮತ್ತು ಮೀನುಗಾರರು ಕರ್ನಾಟಕ ಕಡಲ ಮೀನುಗಾರಿಕೆ ಕಾಯ್ದೆ-1986 ರಲ್ಲಿ ವಿಧಿಸಲಾಗಿರುವ ದಂಡನೆಗಳಿಗೆ ಹೊಣೆಯಾಗುವುದಲ್ಲದೇ ಒಂದು ವರ್ಷದ ಅವಧಿಗೆ ಮಾರಾಟ ಕರರಹಿತ ಡೀಸೆಲ್ ಪಡೆಯಲು ಅನರ್ಹರಾಗುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Kamakshi U.A
(ಕಾಮಾಕ್ಷಿ ಯು.ಎ.) 26/5/2022
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು - ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಮತ್ತು ಅದರ 50 ಪ್ರತಿಗಳನ್ನು ಒದಗಿಸಲು ಕೋರಿದೆ.

ಪ್ರತಿಯನ್ನು

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)(ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.

2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3. ಭಾರತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಕೃಷಿ ಮಂತ್ರಾಲಯ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಕೃಷಿ ಭವನ, ನವದೆಹಲಿ-110 001.
4. ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
5. ಸಂಬಂಧಪಟ್ಟ ಮೀನುಗಾರಿಕೆ ಜಂಟಿ ನಿರ್ದೇಶಕರುಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
6. ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
7. ಕಂಟ್ರೋಲ್ ರೂಮ್-ಕಂ-24x7 ಹೆಲ್ಪ್ ಲೈನ್ (ಸಹಾಯವಾಣಿ), ಮೀನುಗಾರಿಕೆ ಇಲಾಖೆ.
8. ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿಗಳು / ಜಂಟಿ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು, ಪಸಂಮೀ ಇಲಾಖೆ, ವಿಕಾಸಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು / ಸಮನ್ವಯ-ಕಂಪೆಂಡಿಯಂ.